PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 12/1/2021

# ಮುಖ್ಯಮಂತ್ರಿ ಪರ ಸಚಿವರ ಒಗ್ಗಟ್ಟು

**ಸಚಿವ ಸಂಪುಟ ವಿಸ್ತರಣೆಗೆ ಸಿಎಂ ಯಡಿಯೂರಪ್ಪ ತೀವ್ರ ಕಸರತ್ತು ನಡೆಸುತ್ತಿರುವ ಬೆನ್ನಲ್ಲೇ, 'ಯಡಿಯೂರಪ್ಪ ಸಿಎಂ ಸ್ಥಾನದಲ್ಲಿ ಮುಂದುವರಿಯಲಾರರು. ಅವರನ್ನು ಬದಲಾವಣೆ ಮಾಡಲು ಎಲ್ಲ ರೀತಿಯ ತಯಾರಿ ನಡೆದಿದೆ' ಎಂಬ ವಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿಕೆ ರಾಜಕೀಯ ಚರ್ಚೆಗೆ ಕಾರಣವಾಗಿದೆ. ಹಲವು ಸಚಿವರು, ಶಾಸಕರು ಸಿದ್ದರಾಮಯ್ಯ ವಿರುದ್ಧ ಮುಗಿಬಿದ್ದಿದ್ದಾರಲ್ಲದೆ, ಸಿಎಂ ಯಡಿಯೂರಪ್ಪ ಅವರ ಬೆಂಬಲಕ್ಕೆ ನಿಲ್ಲುವ ಮೂಲಕ ಒಗ್ಗಟ್ಟು ಪ್ರದರ್ಶಿಸಿದ್ದಾರೆ.**

## ಬಿಎಸ್‌ವೈ ಸಿಎಂ ಆಗಿ ಮುಂದುವರಿಯಲ್ಲ: ಸಿದ್ದು

**ಹುಬ್ಬಳ್ಳಿ:** ಬಿಎಸ್‌ವೈ ಯಡಿಯೂರಪ್ಪ ಸಿಎಂ ಸ್ಥಾನದಲ್ಲಿ ಮುಂದುವರಿಯಲಾರರು. ಅವರನ್ನು ಬದಲಾವಣೆ ಮಾಡಲು ಎಲ್ಲ ರೀತಿಯ ತಯಾರಿ ನಡೆದಿದೆ ಎಂದು ವಿಧಾನಸಭೆ ವಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿ ಹಾಗೂ ಆರ್‌ಎಸ್‌ಎಸ್ ಸ್ನೇಹಿತರು ನೀಡಿದ ಮಾಹಿತಿಯಂತೆ ಸಿಎಂ ಬದಲಾಗುತ್ತಾರೆಂಬ ಹೇಳಿಕೆ ನೀಡಿದ್ದೇನೆ. ಬದಲಾವಣೆ ಆಗುತ್ತದೆಯೋ ಇಲ್ಲವೋ ಎಂಬುದನ್ನು ಅವರೇ ಸ್ಪಷ್ಟಪಡಿಸಲಿ ಎಂದರು.

**30 ಪರ್ಸೆಂಟ್ ಕಮಿಷನ್ ಸರ್ಕಾರ:** ರಾಜ್ಯದಲ್ಲಿನ ಬಿಜೆಪಿ ಸರ್ಕಾರ 30 ಪರ್ಸೆಂಟ್ ಕಮಿಷನ್ ಸರ್ಕಾರವಾಗಿದೆ. ಇದರ ಬಗ್ಗೆ ನಿಮಗೇನಾದರೂ ಅನುಮಾನ ಇದೆಯೇ ಎಂದು ಇದೇ ಸಂದರ್ಭದಲ್ಲಿ ಸಿದ್ದರಾಮಯ್ಯ ಪ್ರಶ್ನಿಸಿದರು.

ನನ್ನ ನೇತೃತ್ವದ ಕಾಂಗ್ರೆಸ್ ಸರ್ಕಾರ ಇದ್ದಾಗ ಬೆಂಗಳೂರಿಗೆ ಬಂದಿದ್ದ ಪ್ರಧಾನಿ ಮೋದಿ ಇದೊಂದು 10 ಪರ್ಸೆಂಟ್ ಕಮಿಷನ್ ಸರ್ಕಾರ ಎಂದು ಆರೋಪಿಸಿದ್ದರು. ಆದರೆ ನನ್ನ ಸರ್ಕಾರ ಯಾವುದೇ ಹಗರಣ ನಡೆಸಲಿಲ್ಲ. ಸಿಎಂ ಯಡಿಯೂರಪ್ಪ ಪುತ್ರ ಆರ್‌ಟಿಜಿಎಸ್ ಮೂಲಕ 7.10 ಕೋಟಿ ರೂ. ಹಣ ಪಡೆದಿದ್ದು, ಹಣ ಇಲ್ಲದೆ ಅಧಿಕಾರಿಗಳ ವರ್ಗವಾಗದು. ಎಲ್‌ಒಸಿ ಬಿಡುಗಡೆ ಆಗುತ್ತಿಲ್ಲ. ಇದಾವುದು ಪ್ರಧಾನಿ ಮೋದಿಗೆ ಕಾಣಿಸುತ್ತಿಲ್ಲವೋ ಅಥವಾ ಜಾಣ ಕುರುಡುತನ ಪ್ರದರ್ಶಿಸುತ್ತಿದ್ದಾರೋ ಎಂದು ಪ್ರಶ್ನಿಸಿದರು.

## ಬದಲಾವಣೆ ಬಗ್ಗೆ ಹೇಳಲು ನೀನ್ಯಾರು?

**ದಾವಣಗೆರೆ:** ಮುಖ್ಯಮಂತ್ರಿ ಸ್ಥಾನ ಬದಲಾವಣೆ ಬಗ್ಗೆ ಹೇಳಲು ನೀನ್ಯಾರು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ವಿರುದ್ಧ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ರೇಣುಕಾಚಾರ್ಯ ಏಕವಚನದಲ್ಲಿ ಸಂಬೋಧಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿ, ಮೊದಲು ನಿಮ್ಮ ತಟ್ಟೆಯಲ್ಲಿ ಏನು ಬಿದ್ದಿದೆ ಎಂದು ನೋಡಿಕೊಳ್ಳಿ. ಡಿಕೆಶಿ ಕೆಲವರ ಬಾಯಲ್ಲಿ ನಾನೇ ಸಿಎಂ ಆಗುತ್ತೇನೆ ಎಂದು ಹೇಳಿಸುತ್ತಾರೆ, ಹಲವರು ಸಿದ್ದರಾಮಯ್ಯ ಅವರೇ ಸಿಎಂ ಎನ್ನುತ್ತಾರೆ. ಯಾರಿಗೂ ಜನಾದೇಶವೇ ಸಿಕ್ಕಿಲ್ಲ, ಆದರೂ ಸಿಎಂ ಸ್ಥಾನಕ್ಕೆ ಬಡಿದಾಡುತ್ತಿದ್ದಾರೆ.



ಸಿದ್ದರಾಮಯ್ಯನವರೇ ನಿಮ್ಮದು ಚಾಮುಂಡೇಶ್ವರಿನೋ, ವರುಣಾನೋ, ಬಾದಾಮಿನೋ ಎಂದು ಪ್ರಶ್ನಿಸಿದರು. ಸೂರ್ಯ-ಚಂದ್ರ ಇರುವುದು ಎಷ್ಟು ಸತ್ಯವೋ ಬಿಎಸ್‌ವೈ ಈ ಅವಧಿ ಪೂರ್ಣ ಸಿಎಂ ಆಗಿರುವುದು ಅಷ್ಟೇ ಸತ್ಯ. ವರಿಷ್ಠರು ಸಹ ಸಿಎಂ ಬದಲಾವಣೆ ಇಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿದ್ದಾರೆ ಎಂದರು.

## ಸಿದ್ದು, ಎಚ್ಡಿಕೆ ಹಗಲು ಕನಸು

**ಮೈಸೂರು:** ಮತ್ತೆ ಸಿಎಂ ಆಗುತ್ತೇವೆ ಎಂದು ಸಿದ್ದರಾಮಯ್ಯ ಹಾಗೂ ಕುಮಾರಸ್ವಾಮಿ ಹಗಲು ಕನಸು ಕಾಣುತ್ತಿದ್ದಾರೆ. ಈ ಜನ್ಮದಲ್ಲಿ ಸಿದ್ದರಾಮಯ್ಯ ಮತ್ತೆ ಸಿಎಂ ಆಗಲ್ಲ, ಜೆಡಿಎಸ್ ಅಧಿಕಾರಕ್ಕೆ ಬರುವುದಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ಲೇವಡಿ ಮಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಎಂದು ಸುಮ್ಮನೆ ಮಾತನಾಡಲಾಗುತ್ತಿದೆ. ಕೇಂದ್ರ ನಾಯಕರು, ಶಾಸಕರು ಯಾರೂ ಹೇಳಿಲ್ಲ. ಇದನ್ನ ಹೇಳುತ್ತಿರುವುದು ಸಿದ್ದರಾಮಯ್ಯ ಒಬ್ಬರೆ. ಮುಖ್ಯಮಂತ್ರಿ ಸ್ಥಾನ ಕಳೆದುಕೊಂಡ ನಂತರ ಅವರಿಗೆ ಅದರ ಮೇಲೆ ಕಣ್ಣು ಬಿದ್ದಿದೆ. ಹಾಗಾಗಿ ಆಗಾಗ ಈ ರೀತಿ ಹೇಳಿಕೆ ನೀಡುತ್ತಾರೆ ಎಂದು ಕಿಡಿ ಕಾರಿದರು.





ಮುಖ್ಯಮಂತ್ರಿ ಮತ್ತು ಬಿಜೆಪಿ ನಾಯಕತ್ವ ಬದಲಾವಣೆ ಕುರಿತು ಮಾತನಾಡಲು ವಿಪಕ್ಷ ನಾಯಕ ಸಿದ್ದರಾಮಯ್ಯ ಅವರು ಬಿಜೆಪಿ ವಕ್ತಾರರೇ? ಇಲ್ಲವೇ ವರಿಷ್ಠರೇ? ಸಿಎಂ ಬದಲಾವಣೆ ಕುರಿತು ಮಾತನಾಡಲು ಅವರಿಗೆ ಯಾವುದೇ ನೈತಿಕ ಹಕ್ಕಿಲ್ಲ.

• ಜಗದೀಶ ಶೆಟ್ಟರ್, ಸಚಿವ



ಸಿಎಂ ಯಡಿಯೂರಪ್ಪ ಬದಲಾವಣೆ ವಿಚಾರ ಸತ್ಯಕ್ಕೆ ದೂರ. ಪಕ್ಷದ ವರಿಷ್ಠರೇ ನಾಯಕತ್ವ ಬದಲಾವಣೆ ಇಲ್ಲ ಎಂದಿದ್ದಾರೆ. ಪಕ್ಷದ ಎಲ್ಲ ನಾಯಕರೂ ಹತ್ತಾರು ಬಾರಿ ಇದನ್ನೇ ಸ್ಪಷ್ಟಪಡಿಸಿದ್ದಾರೆ. ಈಗ ನಾನೂ ಅದನ್ನೇ ಹೇಳುತ್ತಿದ್ದೇನೆ.

• ಶಿವರಾಮ ಹೆಬ್ಬಾರ, ಸಚಿವ



ಮುಖ್ಯಮಂತ್ರಿಗಳ ಬದಲಾವಣೆ ಪ್ರಶ್ನೆಯೇ ಇಲ್ಲ. ಗ್ರಾಪಂ ಚುನಾವಣೆಯಲ್ಲೂ ಬಿಜೆಪಿ ಭರ್ಜರಿ ಗೆಲುವು ಸಾಧಿಸಿದ್ದು, ಕಾಂಗ್ರೆಸ್ ವಾರಸುದಾರರಿಲ್ಲದ ಮನೆಯಂತಾಗಿದೆ. ಆದರೂ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ ಪ್ರತಿನಿತ್ಯವೂ ಮುಖ್ಯಮಂತ್ರಿಯಾಗುವ ಕನಸು ಕಾಣುತ್ತಿದ್ದಾರೆ.

• ಗೋವಿಂದ ಕಾರಜೋಳ, ಡಿಸಿಎಂ

ಡಿ.ಕೆ.ಶಿವಕುಮಾರ ಕಂಡಕ್ಟರ್ ಆಗಿದ್ದರೆ, ಮಾಜಿ ಸಿಎಂ ಸಿದ್ದರಾಮಯ್ಯನವರು ಡ್ರೈವರ್ ಆಗಿದ್ದಾರೆ. ಕಂಡಕ್ಟರ್ ಸೀಟಿ ಹೊಡೆದರೆ ಡ್ರೈವರ್ ಬಸ್ ನಿಲ್ಲಿಸಬೇಕಾದ ಸ್ಥಿತಿ ಇದೆ. ಕಾಂಗ್ರೆಸ್ ಎಂಬ ಬಸ್‌ನ ನಾಲ್ಕು ಚಕ್ರಗಳು ಪಂಚರ್ ಆಗಿದ್ದು, ಮುಂದಕ್ಕೂ ಹೋಗದೆ, ಹಿಂದಕ್ಕೂ ಹೋಗದಂತಾಗಿದೆ.

• ಬಸವರಾಜ ಬೊಮ್ಮಾಯಿ, ಗೃಹ ಸಚಿವ



ಸಿಎಂ ಹುದ್ದೆಯಲ್ಲಿ ಯಡಿಯೂರಪ್ಪ ಅವರೇ ಮುಂದುವರಿಯಬೇಕೆಂಬ ಅಭಿಪ್ರಾಯ ಶಾಸಕರ ಸಭೆಯಲ್ಲಿ ವ್ಯಕ್ತವಾಗಿದೆ. ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಹೈಕಮಾಂಡ್ ಪ್ರಸ್ತಾಪ ಮಾಡಿಲ್ಲ. ಪದೇ ಪದೆ ಸುಳ್ಳು ಹೇಳಿ ಅದನ್ನೇ ಸತ್ಯ ಮಾಡಲು ವಿಪಕ್ಷ ನಾಯಕರು ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ಮುಂದಾಗಿದ್ದಾರೆ.

• ಆರ್.ಅಶೋಕ್, ಸಚಿವ

ಯಡಿಯೂರಪ್ಪ ಸಿಎಂ ಆದಾಗಿನಿಂದಲೂ ನಾಯಕತ್ವ ಬದಲಾವಣೆ ಕೂಗು ಕೇಳಿಬರುತ್ತಿದೆ. ಆದರೆ ಬಿಎಸ್‌ವೈ ಅವರಂತಹ ಸಮರ್ಥ ನಾಯಕರು ನಮ್ಮ ಪಕ್ಷದಲ್ಲಿ ಯಾರಿದ್ದಾರೆ ಎಂಬುದನ್ನು ತಿಳಿಸಿ. ಬಿಎಸ್‌ವೈ ದಕ್ಷಿಣ ಭಾರತದಲ್ಲಿ ಬಿಜೆಪಿ ಕಟ್ಟಿ ಬೆಳೆಸಿದ ಮಹಾನಾಯಕ. ಪಕ್ಷಕ್ಕಾಗಿ ಜೀವ ಪಣಕ್ಕಿಟ್ಟು ಹೋರಾಡಿದ್ದಾರೆ.

• ಹರತಾಳು ಹಾಲಪ್ಪ, ಶಾಸಕ